ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/197(01)/2023-24

ದಿನಾಂಕ:20.12.2024

## ಸುತ್ತೋಲೆ

ವಿಷಯ: ಸರ್ಕಾರದ ಸಭೆ ಸಮಾರಂಭಗಳ ಆಹ್ವಾನ ಪತ್ರಿಕೆಗಳ ಸಭಾ ಸೂಚನಾ ಪತ್ರಗಳನ್ನು ತಲುಪಿಸುವ ಬಗ್ಗೆ.

ಉಲ್ಲೇಖ: 1) ಮಾನ್ಯ ಸಮಾಜ ಕಲ್ಯಾಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಕಾರ್ಯದರ್ಶಿಗಳ ಪತ್ರದ ಸಂಖ್ಯೆ ಸಕಇ/ಆಕಾ/945/2023, ದಿನಾಂಕ:04.11.2023.

2) ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು, ಇವರ ಪತ್ರದ ಸಂಖ್ಯೆ:MYSDC/PROT/PRO/106/2024(621208).

3) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:19.12.2024.

****

ಮೈಸೂರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿಗೆ ಸಂಬಂಧಿಸಿದ ಸಭೆ ಸಮಾರಂಭಗಳ ಯಾವುದೇ ಆಹ್ವಾನ ಪತ್ರಿಕೆಗಳು, ಸಭಾ ಸೂಚನಾ ಪತ್ರಗಳು ಮಾನ್ಯ ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರ ವಿಧಾನ ಸೌಧ ಕಛೇರಿಗೆ ಸಮರ್ಪಕವಾಗಿ ತಲುಪದ ಕಾರಣ ಸಂವಹನದ ಹಾಗೂ ಸಂಪರ್ಕದ ಕೊರತೆ ಆಗುತ್ತಿರುವುದು ಮಾನ್ಯ ಸಚಿವರ ಗಮನಕ್ಕೆ ಬಂದಿದ್ದು, ಯಾವುದೇ ಸಭೆ ಸಮಾರಂಭದ ಆಹ್ವಾನ ಪತ್ರಿಕೆಗಳು, ಸಭಾ ಸೂಚನಾ ಪತ್ರಗಳನ್ನು ಸಕಾಲದಲ್ಲಿ ಮಾನ್ಯ ಸಚಿವರ ಗಮನಕ್ಕೆ ಹಾಗೂ ಬೆಂಗಳೂರಿನ ವಿಧಾನಸೌಧ ಕಛೇರಿಗೆ ತಲುಪಿಸಲು ಕ್ರಮಕೈಗೊಳ್ಳುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಉಲ್ಲೇಖ ಪತ್ರ 02ರಲ್ಲಿ ತಿಳಿಸಿರುತ್ತಾರೆ.

ಆದುದರಿಂದ ಉಲ್ಲೇಖಿತ ಪತ್ರ 02ರಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ಇವರು ತಿಳಿಸಿರುವಂತೆ ಇನ್ನುಮುಂದೆ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸುವ ಯಾವುದೇ ಸಮಾರಂಭಗಳ ಆಹ್ವಾನ ಪತ್ರಿಕೆಗಳು ಮತ್ತು ಸಭಾ ಸೂಚನಾ ಪತ್ರಗಳನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಮಾನ್ಯ ಸಚಿವರ ಕಾರ್ಯಾಲಯ, ವಿಧಾನ ಸೌಧ ಬೆಂಗಳೂರು ಇಲ್ಲಿಗೆ ಸಕಾಲದಲ್ಲಿ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ

B. Shankar 23/12/2024
ಉಪ ಕುಲಸಚಿವ(ಸಾಮಾನ್ಯ)

ಕುಲಸಚಿವರಿಂದ ಕರಡು ಅನುಮೋದಿಸಿದೆ

**ಪ್ರತಿಗಳು:**

1. ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು-ಇವರಿಗೆ ಮಾಹಿತಿಗಾಗಿ.
2. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
4. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
6. ಸಂಯೋಜಕರು, ಐ.ಸಿ.ಡಿ, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸದರಿ ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
7. ಮಾನ್ಯ ಕುಲಪತಿಯವರ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.

To: Mr. Kanti
to upload
24/12

Scanned with OKEN Scanner